ಅ) ಇವುಗಳಿಗೆ ಎಷ್ಟು ಹಣ ಮಂಜೂರಾಗಿದೆ. ಎಷ್ಟು ಹಣ ಖರ್ಚು ಮಾಡಲಾಗಿದೆ. ಪ್ರತಿ ಕಾಮಗಾರಿವಾರು ಮಾಹಿತಿ ನೀಡುವುದು?

ಇ) ಎಲ್ಲಾ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆಯೇ? ಇಲ್ಲದಿದ್ದಲ್ಲಿ ಕಾರಣವೇನು?

ಶ್ರೀ ಬಿ.ಎಸ್. ಪಾಟೀಲ್(ಸಾಸನೂರು) (ಕೃಷಿಮಾರುಕಟ್ಟೆ ಸಚಿವರು) :

ಅ) ಮಾಗಡಿ ವಿಧಾನಸಭಾ ಕ್ಷೇತ್ರದಲ್ಲಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಚನ್ನಪಟ್ಟಣ ವ್ಯಾಪ್ತಿಯ ಕುದೂರು ಉಪ ಮಾರುಕಟ್ಟೆಯಲ್ಲಿ ಒಂದು ಮುಚ್ಚು ಹರಾಜುಕಟ್ಟೆಯನ್ನು ನಿರ್ಮಿಸಲಾಗಿದೆ. ಮಾಗಡಿಯಲ್ಲಿ ಸೂಕ್ತ ಜಮೀನು ದೊರಕದೆ ಇರುವುದರಿಂದ ಅಭಿವೃದ್ಧಿ ಕಾಮಗಾರಿ ಕೈಗೊಂಡಿರುವುದಿಲ್ಲ.

ಆ) ಸದರಿ ಕಾಮಗಾರಿಯನ್ನು ರೂ 1,72,080-00 ಗಳ ವೆಚ್ಚದಲ್ಲಿ ಪೂರ್ಣಗೊಳಿಸಲಾಗಿದೆ.

ಇ) ಹೌದು

ಶಿವಮೊಗ್ಗ ಕೃಷಿಮಾರುಕಟ್ಟೆ ಸಮಿತಿ ವತಿಯಿಂದ ಕಾಮಗಾರಿಗಳು

694(847) ಶ್ರೀ ಹೆಚ್.ಎಮ್.ಚಂದ್ರಶೇಖರಪ್ಪ(ಶಿವಮೊಗ್ಗ) : ಮಾನ್ಯ ಕೃಷಿ ಮಾರುಕಟ್ಟೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ಕೃಷಿ ಮಾರುಕಟ್ಟೆ ಸಮಿತಿಯವರ ಅನುದಾನದಲ್ಲಿ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿನ ಚಾನಲ್ ರಸ್ತೆಗಳ ದುರಸ್ತಿಗಾಗಿ ಅನುದಾನ ಬಳಸಿಕೊಳ್ಳಲು ಅನುಮತಿ ನೀಡುವ ಯಾವುದಾದರೂ ಯೋಜನೆ ಸರ್ಕಾರದ ಮುಂದಿದೆಯೇ ವಿವರ ತಿಳಿಸುವುದು?

ಆ) ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿವತಿಯಿಂದ ನಿರ್ಮಾಣ ಮಾಡುತ್ತಿರುವ ಕಾಮಗಾರಿಗಳ ಕಳಪೆ ಗುಣಮಟ್ಟದಿಂದ ಕೂಡಿರುವ ಬಗ್ಗೆ ದೂರುಗಳು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಈ ಬಗ್ಗೆ ಸರ್ಕಾರದ ಕ್ರಮ ಏನು? ವಿವರ ತಿಳಿಸುವುದು?

ಇ) ಶಿವಮೊಗ್ಗ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ವತಿಯಿಂದ ನಿರ್ಮಾಣ ಮಾಡಲಾಗುತ್ತಿರುವ ವಿವಿಧ ಕಾಮಗಾರಿಗಳ ವಿವರ ಮತ್ತ ಈ ಕಾಮಗಾರಿಗಳ ಅಂದಾಜು ವೆಚ್ಚ ಎಷ್ಟು; ವಿವರ ತಿಳಿಸುವುದು?

ಶ್ರೀ ಬಿ.ಎಸ್. ಪಾಟೀಲ್ (ಸಾಸನೂರು) (ಕೃಷಿ ಮಾರುಕಟ್ಟೆ ಸಚಿವರು) :

ಅ) ಇಲ್ಲ

ಆ) ಹಾಲಿ ಮಾಡಿಸುತ್ತಿರುವ ಕಾಮಗಾರಿಗಳಲ್ಲಿ ಯಾವ ಕೆಲಸವೂ ಕಳಪೆಯಾಗಿರುವ ಬಗ್ಗೆ ದೂರು ಬಂದಿರುವುದಿಲ್ಲ.

ಇ) 27 ವಿವಿಧ ಕಾಮಗಾರಿಗಳನ್ನು ಅಂದಾಜು ರೂ. 9.33 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗಿದೆ.

ಶಿವಮೊಗ್ಗ ಗಾಜನೂರು ಬಳಿ ನಿರ್ಮಾಣ ಮಾಡುತ್ತಿರುವ ತುಂಗಾ ಮೇಲ್ದಂಡೆ ಯೋಜನೆ

695(848) ಶ್ರೀ ಚಂದ್ರಶೇಖರಪ್ಪ ಹೆಚ್.ಎಂ. (ಶಿವಮೊಗ್ಗ) : ಮಾನ್ಯ ಜಲ ಸಂಪನ್ಮೂಲ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ಗಾಜನೂರು ಬಳಿ ತುಂಗಾ ಮೇಲ್ದಂಡೆ ಯೋಜನೆ ಸಲುವಾಗಿ ಅರಣ್ಯ ಇಲಾಖೆಗೆ ಸೇರಿದ 400 ಹೆಕ್ಟೇರ್ ಭೂಮಿಯನ್ನು ವಶಪಡಿಸಲು ಕೇಂದ್ರ ಸರ್ಕಾರದ ಪರಿಸರ ಇಲಾಖೆ ಮತಿಯಿಂದ ಅನುಮತಿ ನಿರಾಕರಿಸಲಾಗಿದೆಯೇ?

ಆ) ಹಾಗಿದ್ದಲ್ಲಿ ಈ ಯೋಜನೆಯ ಬಗ್ಗೆ ಸರ್ಕಾರದ ಕ್ರಮ ಏನು ವಿವರ ತಿಳಿಸುವುದು?

ಶ್ರೀ ಹೆಚ್.ಕೆ. ಪಾಟೀಲ್ (ಜಲ ಸಂಪನ್ಮೂಲ ಸಚಿವರು) :

ಅ) ಶಿವಮೊಗ್ಗ ತಾ: ಗಾಜನೂರಿನ ಬಳಿ ನಿರ್ಮಿಸಲಾಗುತ್ತಿರುವ ತುಂಗಾ ಮೇಲ್ದಂಡೆ ಯೋಜನೆಗಾಗಿ 449.55 ಹೆ. ಅರಣ್ಯ ಪ್ರದೇಶವನ್ನು ನೀರಾವರಿ ಕಾರ್ಯಕ್ಕಾಗಿ ಬದಲೀಕರಣಗೊಳಿಸಲು ಕರ್ನಾಟಕ ಸರ್ಕಾರದ ಅರಣ್ಯ, ಪರಿಸರ ಹಾಗೂ ಜೀವಿ ಪರಿಸ್ಥಿತಿ ಶಾಸ್ತ್ರ ಇಲಾಖೆಯಿಂದ ಸಲ್ಲಿಸಲ್ಪಟ್ಟಿದ್ದ ಪ್ರಸ್ತಾವನೆಗೆ ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಇಲಾಖೆಯು ಕೆಲವು ಸ್ಪಷ್ಟೀಕರಣ ಕೋರಿದ್ದು ಸದ್ಯದಲ್ಲಿಯೇ ಸ್ಪಷ್ಟೀಕರಣವನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗುವುದು.

ಆ) ಸರ್ವೋಚ್ಚ ನ್ಯಾಯಾಲಯವು ಸಂರಕ್ಷಿತ ಅರಣ್ಯ ಪ್ರದೇಶದ ಬಿಡುಗಡೆಯ ಬಗ್ಗೆ ವಿಧಿಸಿರುವ ನಿಷೇಧವನ್ನು ತೆರವುಗೊಳಿಸುವ ಪ್ರಾರ್ಥನೆಯೊಂದಿಗೆ ಸರ್ವೋಚ್ಚ ನ್ಯಾಯಾಲಯದಲ್ಲಿ ಮಧ್ಯಂತರ ಅರ್ಜಿಯನ್ನು ಸಲ್ಲಿಸಲಾಗಿದೆ. ಈ ನಿಟ್ಟಿನಲ್ಲಿ ಮುಂದುವರಿಸಲಾದ ಪ್ರಯತ್ನವಾಗಿ ಕೇಂದ್ರ ಸರ್ಕಾರದ ಅರಣ್ಯ ಮತ್ತು ಪರಿಸರ ಇಲಾಖೆಯು ನಿಯೋಜಿಸಿದ್ದ ಇಂಡಿಯನ್ ಬೋರ್ಡ್ ಆಫ್ ವೈಲ್ಡ್ ಲೈಫ್‌ನ ಸದಸ್ಯರು ಸ್ಥಳ ಪರಿಶೀಲನೆಯನ್ನು ದಿ: 25-04-2002 ರಂದು ಕೈಗೊಂಡಿದ್ದು ವರದಿಯನ್ನು ಸರ್ವೋಚ್ಚ ನ್ಯಾಯಾಲಯಕ್ಕೆ ಸಲ್ಲಿಸಿದ ಕೂಡಲೇ ಸದರಿ ಅರಣ್ಯ ಪ್ರದೇಶದ ಬಿಡುಗಡೆಗೆ ಅನುಮತಿಯನ್ನು ಪಡೆಯಲು ಎಲ್ಲಾ ಕ್ರಮವನ್ನು ಜರುಗಿಸಲಾಗುವುದು.

ಶಿವಮೊಗ್ಗ ತಾಲ್ಲೂಕು ವ್ಯಾಪ್ತಿಯಲ್ಲಿ ಹಳದಿ ಪಡಿತರ ಚೀಟಿ ವಿತರಣೆ

696(849) ಶ್ರೀ ಚಂದ್ರ ಶೇಖರಪ್ಪ ಹೆಚ್.ಎಂ.(ಶಿವಮೊಗ್ಗ) : ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಶಿವಮೊಗ್ಗ ತಾಲ್ಲೂಕು ವ್ಯಾಪ್ತಿಯಲ್ಲಿ ನಗರ ಹಾಗೂ ಗ್ರಾಮಾಂತರ ಪ್ರದೇಶದ ಜನರಿಗೆ ಹಳದಿ ಪಡಿತರ ಚೀಟಿ ನೀಡುವ ಬಗ್ಗೆ ನಡೆಸುತ್ತಿರುವ ಸಮೀಕ್ಷೆ ಕಾರ್ಯವು ಪೂರ್ಣಗೊಂಡಿದೆಯೇ?

ಆ) ಈ ಯೋಜನೆ ಅಡಿಯಲ್ಲಿ ಎಷ್ಟು ಜನರಿಗೆ ಹಳದಿ ಪಡಿತರ ಚೀಟಿಗಳನ್ನು ವಿತರಿಸಲಾಗುವುದು?

ಇ) ಈ ಯೋಜನೆಯನ್ನು ನಗರ ಪ್ರದೇಶದ ಕೊಳಚೆ ಪ್ರದೇಶದ ಜನರಿಗೆ ಮಾತ್ರ ಸೀಮಿತಗೊಳಿಸಲಾಗಿದೆಯೇ ಅಥವಾ ಕೊಳಚೆ ಪ್ರದೇಶ ಹೊರತು ಪಡಿಸಿ ಇತರೇ ಪ್ರದೇಶಗಳಲ್ಲಿ ವಾಸ ಮಾಡುತ್ತಿರುವ ಬಡತನ ರೇಖೆಗಿಂತ ಕೆಳಗಿರುವ ಜನರಿಗೂ ವಿಸ್ತರಿಸುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು):

ಶ್ರೀ ರಾಮಲಿಂಗ ರೆಡ್ಡಿ (ಆಹಾರ ಮತ್ತು ನಾಗರಿಕ ಸರಬರಾಜು ಸಚಿವರು) :